ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 09–09–2018**

**ಸಂಖ್ಯೆ: 975/1076**

# ಪತ್ರಿಕಾ ಪ್ರಕಟಣೆ

## 79 ಸನ್ನಡತೆ ಖೈದಿಗಳ ಬಿಡುಗಡೆ

**ಬೆಂಗಳೂರು, ಸೆಪ್ಟೆಂಬರ್ 9 (ಕರ್ನಾಟಕ ವಾರ್ತೆ) :**

ಸನ್ನಡತೆಯ ಬಂದಿಗಳನ್ನು ಅವಧಿ ಪೂರ್ವ ಬಿಡುಗಡೆ ಮಾಡಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ್ ಅವರು ತಿಳಿಸಿದರು.

ಅವರು ಬೆಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಏರ್ಪಡಿಸಿದ್ದ ಸನ್ನಡತೆಯ ಬಂದಿಗಳ ಅವಧಿ ಪೂರ್ವ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಬಿಡುಗಡೆಗೊಂಡ ಬೆಂಗಳೂರು, ಮೈಸೂರು, ಬೆಳಗಾವಿ, ಕಲಬುರಗಿ, ವಿಜಯಪುರ, ಬಳ್ಳಾರಿ ಮತ್ತು ಧಾರವಾಡ ಕಾರಾಗೃಹ ಸೇರಿದಂತೆ ಒಟ್ಟು 79 ಖೈದಿಗಳಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡುತ್ತಾ ಕಾರಾಗೃಹದ ಯಾವುದೇ ಸಮಸ್ಯೆಗಳಿದ್ದರೂ ಸರ್ಕಾರ ಸಕಾರಾತ್ಮಕ ಸ್ಪಂಧಿಸುತ್ತದೆ. ಅವರನ್ನು ಸಮಾಜ ಮುಖ್ಯವಾಹಿನಿಗೆ ತಂದು ಉತ್ತಮ ಜೀವನ ನಡೆಸಲು ಅವಕಾಶ ಕಲ್ಪಿಸಲಾಗುತ್ತಿದೆ. ಕಾರಾಗೃಹದಲ್ಲಿ ಬಂದಿಗಳ ಸಂಖ್ಯೆ ಕಡಿಮೆ ಆಗಬೇಕೆಂದು ಆಶಿಸುತ್ತೇನೆ ಇದಕ್ಕೆ ಸಮಾಜವು ಅದಕ್ಕೆ ಸಹಕರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸರ್ಕಾರದ ಒಳಾಡಳಿತ ಇಲಾಖೆಯ ಕಾರ್ಯದರ್ಶಿ(ಪಿ.ಸಿ.ಎ.ಎಸ್.) ಉಮೇಶ್ ಕುಮಾರ್, ಎನ್.ಎಸ್. ಮೇಘರಿಖ್ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕಾರಾಗೃಹಗಳ ಮಹಾನಿರೀಕ್ಷಕರು, ಪೊಲೀಸ್ ಉಪ ಮಹಾನಿರೀಕ್ಷಕ ಶ್ರೀ ಹೆಚ್.ಎಸ್. ರೇವಣ್ಣ, ಮುಖ್ಯ ಅಧೀಕ್ಷಕ ಎಂ. ಸೋಮಶೇಖರ್, ಅಧೀಕ್ಷಕ ಪಿ.ಎಸ್. ರಮೇಶ್ ಅವರೂ ಸೇರಿದಂತೆ ಹಲವಾರು ಅಧಿಕಾರಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.